ಸಾಕ್ಷಿಯನ್ನು ದಿನಾಂಕ 06-11-2023 ರಂದು ಕರೆದು ಪ್ರಮಾಣ ವಚನ ಮಾಡಿಸಲಾಯಿತು

**ಮುಖ್ಯ ವಿಚಾರಣೆ : ಫಿರ್ಯಾದಿದಾರರ ಪರ ಶ್ರೀ.ಎಸ್ ಜಿ ಯು ವಕೀಲರಿಂದಃ-**

ನಾನು ನನ್ನ ಸ್ವಃಇಚ್ಚಾ ಹೇಳಿಕೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲು ಮನವಿ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ಫಿರ್ಯಾದುದಾರ ಬ್ಯಾಂಕನವರು ನನಗೆ ಅಧಿಕಾರ ನೀಡಿದ ಅಧಿಕಾರ ಪತ್ರದ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಆರೋಪಿ ನೀಡಿದ ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಅದರಲ್ಲಿರುವ ಆರೋಪಿಯ ಸಹಿಯನ್ನು ನಿಪಿ-2 ಎ ಅಂತಾ, ಬ್ಯಾಂಕಿನ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಆರೋಪಿಗೆ ನನ್ನ ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಅಂಚೆ ಸ್ವೀಕೃತ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ಫಿರ್ಯಾದಿಯಲ್ಲಿ ಕೇಳಿದಂತೆ ಆದೇಶ ಮಾಡಬೇಕಾಗಿ ನನ್ನ ಪ್ರಾರ್ಥನೆ.

**ಪಾಟೀಸವಾಲು : ಆರೋಪಿ ಪರ ಶ್ರೀ.ಆರ್ ಎಸ್ ಬಿ ವಕೀಲರಿಂದಃ-**

ವಕೀಲರು ಪಾಟೀಸವಾಲಿಗೆ ಸಮಯಾವಕಾಶ ಕೋರಿದ್ದು ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ನಿರ್ದೇಶನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇ. ಕೇ. ಸರಿ ಅದೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ. ದಂ., ಬನಹಟ್ಟಿ.